# ಕರ್ನಾಟಕ ರಾಜ್ಯಪತ್ರ

**ಅಧಿಕೃತವಾಗಿ ಪ್ರಕಟಿಸಲಾದುದು**

**ವಿಶೇಷ ರಾಜ್ಯ ಪತ್ರಿಕೆ**

| ಭಾಗ – ೧<br>Part – I | ಬೆಂಗಳೂರು, ಮಂಗಳವಾರ, ೦೪ ನವೆಂಬರ್, ೨೦೨೫ (ಕಾರ್ತೀಕ ೧೩, ಶಕವರ್ಷ ೧೯೪೭)<br>BENGALURU, TUESDAY, 04 NOVEMBER, 2025 (KARTHIKA 13, SHAKAVARSHA 1947) | ನಂ. ೬೮೭<br>No. 687 |
|---|---|---|


## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ :- ಕರ್ನಾಟಕ ವಿದ್ಯುಚ್ಛಕ್ತಿ ಮಂಡಳಿ ಇಂಜಿನಿಯರುಗಳ ಸಂಘ, ಬೆಂಗಳೂರು ಈ ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಿಸುವ ಬಗ್ಗೆ.

ಓದಲಾಗಿದೆ :- ಸಹಕಾರ ಸಂಘಗಳ ನಿಬಂಧಕರ ಪತ್ರ ಸಂ.:ಜಂ.ನಿ/ಐಸಿಡಿಪಿ/ಸಂ.ಸಂ-02/104/2024-25, ದಿನಾಂಕ: 28.10.2025.

*****

ಪ್ರಸ್ತಾವನೆ:

ಮೇಲೆ ಓದಲಾದ (1) ರ ಪತ್ರದಲ್ಲಿ ಕರ್ನಾಟಕ ವಿದ್ಯುಚ್ಛಕ್ತಿ ಮಂಡಳಿ ಇಂಜಿನಿಯರುಗಳ ಸಂಘ, (ನೋಂ.ಸಂ.:76/26-11-63) ನಂ.28, ರೇಸ್‌ಕೋರ್ಸ್ ಕ್ರಾಸ್ ರಸ್ತೆ, ಆನಂದ್‌ರಾವ್ ವೃತ್ತ, ಬೆಂಗಳೂರು-09 ಈ ಸಂಘದ ಬೈಲಾ ಪ್ರಕಾರ ಕಾರ್ಯಕಾರಿ ಸಮಿತಿ ಅವಧಿಯು 03 ವರ್ಷಗಳಾಗಿದ್ದು, ಹಾಲಿ ಆಡಳಿತ ಮಂಡಳಿ ಅವಧಿಯು ದಿನಾಂಕ: 11.10.2025 ರಂದು ಮುಕ್ತಾಯಗೊಂಡಿರುತ್ತದೆ. ಸಂಘದ ವಾರ್ಷಿಕ ಸರ್ವಸದಸ್ಯರ ಸಭೆ ಹಾಗೂ ಕಾರ್ಯಕಾರಿ ಸಮಿತಿ ಚುನಾವಣೆಯ ಬಗ್ಗೆ ಹಾಲಿ ಆಡಳಿತ ಮಂಡಳಿ ಯಾವುದೇ ಕ್ರಮ ಕೈಗೊಂಡಿರುವುದಿಲ್ಲ. ಸಂಘದ ಚುನಾವಣೆ ನಡೆಸಲು ಕ್ರಮ ಕೈಗೊಳ್ಳುವಂತೆ ಸಂಘದ ಸದಸ್ಯರುಗಳ ದೂರಿನಂತೆ ಜಿಲ್ಲಾ ನೋಂದಣಾಧಿಕಾರಿಗಳು ಕೈಗೊಂಡ ವಿಚಾರಣಾ ಆದೇಶದಲ್ಲಿ ಕರ್ನಾಟಕ ವಿದ್ಯುಚ್ಛಕ್ತಿ ಮಂಡಳಿ ಇಂಜಿನಿಯರುಗಳ ಸಂಘದ ಚುನಾವಣೆಯನ್ನು ಬೈಲಾ ರೀತ್ಯಾ 07 ದಿನಗಳೊಳಗಾಗಿ ಚುನಾವಣಾ ವೇಳಾಪಟ್ಟಿಯನ್ನು ಹೊರಡಿಸುವಂತೆ ಹಾಗೂ ಚುನಾವಣಾ ವೇಳಾಪಟ್ಟಿಯನ್ನು ಹೊರಡಿಸಿದ ದಿನಾಂಕದಿಂದ ಚುನಾವಣಾ ಪ್ರಕ್ರಿಯೆಯನ್ನು 30 ದಿನಗಳೊಳಗಾಗಿ ಪೂರ್ಣಗೊಳಿಸಿ ವರದಿ ಸಲ್ಲಿಸಲು ಸೂಚಿಸಿರುತ್ತಾರೆ. ಅಲ್ಲದೇ, ಸಂಘದ ಚುನಾವಣಾವಧಿಯು ದಿನಾಂಕ:12.10.2025 ರಂದು ಮುಕ್ತಾಯಗೊಂಡಿದ್ದರಿಂದ ಇನ್ನು ಮುಂದೆ ಶಾಸನಾತ್ಮಕ ವೆಚ್ಚ, ದೈನಂದಿನ ವೆಚ್ಚ ಮತ್ತು ಚುನಾವಣಾ ವೆಚ್ಚವನ್ನು ಮಾಡುವಂತಿಲ್ಲವೆಂದು ಸಂಘಕ್ಕೆ ನಿರ್ದೇಶನ ನೀಡಿ ತಪ್ಪಿದ್ದಲ್ಲಿ, ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960ರ ಕಲಂ27(ಎ) ಮತ್ತು (ಬಿ) ರೀತ್ಯಾ ಕ್ರಮವಿಡಲಾಗುವುದೆಂದು ಸಹ ಸದರಿ ಆದೇಶದಲ್ಲಿ ತಿಳಿಸಲಾಗಿದೆ. ಆದರೆ ಸಂಘದ ಹಿಂದಿನ ಆಡಳಿತ ಮಂಡಳಿಯ ಅವಧಿಯು ದಿನಾಂಕ:11.10.2025ರಂದು ಮುಕ್ತಾಯಗೊಂಡಿದ್ದರೂ ಸಂಘದ ಚುನಾವಣೆ ನಡೆಸಲು ಚುನಾವಣಾ ವೇಳಾಪಟ್ಟಿಯನ್ನು ತಹಲ್‌ವರೆವಿಗೂ ಹೊರಡಿಸಿರುವುದಿಲ್ಲವೆಂದು ಹಾಗೂ ಸಂಘಕ್ಕೆ ಚುನಾವಣೆ ನಡೆಸುವಂತೆ ಪದೇ ಪದೇ ದೂರು ಅರ್ಜಿಗಳು ಸ್ವೀಕೃತವಾಗಿರುವುದಾಗಿ ತಿಳಿಸಿರುತ್ತಾರೆ. ಮುಂದುವರೆದು, ಸಂಘದ ಆಡಳಿತ ಮಂಡಳಿಯವರು ಚುನಾವಣೆ ನಡೆಸಲು 90 ದಿನಗಳ ಕಾಲಾವಕಾಶ ಕೋರಿ ಸಂಘವು ಸಲ್ಲಿಸಿದ್ದ ಪ್ರಸ್ತಾವನೆಯನ್ನು ಸಹಾ ತಿರಸ್ಕರಿಸಲಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಸದರಿ ಸಂಘಕ್ಕೆ ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960ರ ಕಲಂ 27(ಎ) (1)(ಬಿ) ರೀತ್ಯಾ ಆಡಳಿತಾಧಿಕಾರಿಯನ್ನು ನೇಮಿಸಿ ಅವರ ಸುಪರ್ಧಿಯಲ್ಲಿ ಚುನಾವಣೆ ನಡೆಸುವುದು ಸೂಕ್ತವೆಂದು ಜಿಲ್ಲಾ ನೋಂದಣಾಧಿಕಾರಿಗಳು

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297



ಹಾಗೂ ಸಹಕಾರ ಸಂಘಗಳ ಉಪ ನಿಬಂಧಕರು, 4ನೇ ವಲಯ, ಬೆಂಗಳೂರು ನಗರ ಜಿಲ್ಲೆ ಇವರು ಮಾಡಿರುವ ಶಿಫಾರಸ್ಸನ್ನು ಪರಿಗಣಿಸಿ ಕರ್ನಾಟಕ ಸಂಘಗಳ ನೋಂದಣಿ ಅಧಿನಿಯಮ 1960 ರ ಕಲಂ 27ಎ ರನ್ವಯ ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಿಸುವ ಪ್ರಸ್ತಾವನೆಯನ್ನು ಸಹಕಾರ ಸಂಘಗಳ ನಿಬಂಧಕರು ಸಲ್ಲಿಸಿರುತ್ತಾರೆ

ಸಹಕಾರ ಸಂಘಗಳ ನಿಬಂಧಕರ ಪ್ರಸ್ತಾವನೆ ಮತ್ತು ಜಿಲ್ಲಾ ನೋಂದಣಾಧಿಕಾರಿಗಳು ಹಾಗೂ ಸಹಕಾರ ಸಂಘಗಳ ಉಪ ನಿಬಂಧಕರು, 4ನೇ ವಲಯ, ಬೆಂಗಳೂರು ನಗರ ಜಿಲ್ಲೆ ಇವರು ಮಾಡಿರುವ ಶಿಫಾರಸ್ಸನ್ನು ಪರಿಶೀಲಿಸಲಾಗಿ, ಸಂಘದ ಆಡಳಿತ ಮಂಡಳಿಯ ಅವಧಿಯು ದಿನಾಂಕ: 11.10.2025 ರಂದು ಮುಕ್ತಾಯಗೊಂಡಿದ್ದು, ಅವಧಿ ಮುಕ್ತಾಯಗೊಳ್ಳುವ ಪೂರ್ವದಲ್ಲಿ ಸಂಘದ ಚುನಾವಣೆಯನ್ನು ನಡೆಸುವ ಸಂಬಂಧ ನಡೆಸಿದ್ದ ವಿಚಾರಣಾ ಅದೇಶದಲ್ಲಿ ಸಂಘದ ಚುನಾವಣೆಯನ್ನು ಬೈಲಾ ರೀತ್ಯಾ 07 ದಿನಗಳೊಳಗಾಗಿ ಚುನಾವಣಾ ವೇಳಾಪಟ್ಟಿಯನ್ನು ಹೊರಡಿಸುವಂತೆ ಹಾಗೂ ಚುನಾವಣಾ ವೇಳಾಪಟ್ಟಿಯನ್ನು ಹೊರಡಿಸಿದ ದಿನಾಂಕದಿಂದ ಚುನಾವಣಾ ಪ್ರಕ್ರಿಯೆಯನ್ನು 30 ದಿನಗಳೊಳಗಾಗಿ ಪೂರ್ಣಗೊಳಿಸಿ ವರದಿ ಸಲ್ಲಿಸಲು ಸಂಘಕ್ಕೆ ಸೂಚಿಸಿದ್ದರೂ ಯಾವುದೇ ಕ್ರಮ ವಹಿಸದೇ ಮತ್ತು 90 ದಿನಗಳ ಕಾಲಾವಕಾಶವನ್ನು ಕೋರಿ ಅಂದಿನ ಆಡಳಿತ ಮಂಡಳಿಯವರು ಸಲ್ಲಿಸಿದ್ದ ಪ್ರಸ್ತಾವನೆಯೂ ತಿರಸ್ಕೃತಗೊಂಡಿರುವ ಹಿನ್ನಲೆಯಲ್ಲಿ ಸಹಕಾರ ಸಂಘಗಳ ನಿಬಂಧಕರ ಪ್ರಸ್ತಾವನೆಯಂತೆ ಹಾಗೂ ಸಂಘದ ಹಿತದೃಷ್ಠಿಯಿಂದ ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಿಸಿ, ಅವರ ನೇತೃತ್ವದಲ್ಲಿ ಸಂಘದ ಬೈಲಾ ರೀತ್ಯ ಚುನಾವಣೆ ನಡೆಸಿ, ನೂತನ ಚುನಾಯಿತ ಆಡಳಿತ ಮಂಡಳಿಗೆ ಪ್ರಭಾರವನ್ನು ಹಸ್ತಾಂತರಿಸುವುದು ಸೂಕ್ತವೆಂದು ಮನಗಂಡು ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960 ರ ಕಲಂ. 27(ಎ) ರನ್ವಯ ಸಂಘಕ್ಕೆ ಆಡಳಿತಾಧಿಕಾರಿಯನ್ನು ನೇಮಿಸಲು ಸರ್ಕಾರವು ತೀರ್ಮಾನಿಸಿದೆ. ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಸಿಒ 297 ಸಿಎಸ್‌ಆರ್ 2025**

**ಬೆಂಗಳೂರು, ದಿನಾಂಕ: 03.11.2025**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960 ರ ಕಲಂ 27-ಎ ರನ್ವಯ ಕರ್ನಾಟಕ ವಿದ್ಯುಚ್ಛಕ್ತಿ ಮಂಡಳಿ ಇಂಜಿನಿಯರುಗಳ ಸಂಘ, ನಂ.28, ರೇಸ್‌ಕೋರ್ಸ್ ಕ್ರಾಸ್ ರಸ್ತೆ, ಆನಂದ್‌ರಾವ್ ವೃತ್ತ, ಬೆಂಗಳೂರು-09 (ನೋಂ.ಸಂ.:76/26-11-63) ಈ ಸಂಘಕ್ಕೆ ಸಹಕಾರ ಸಂಘಗಳ ಉಪ ನಿಬಂಧಕರು ಹಾಗೂ ಜಿಲ್ಲಾ ನೋಂದಣಾಧಿಕಾರಿಗಳು, 2ನೇ ವಲಯ, ಬೆಂಗಳೂರು ನಗರ ಜಿಲ್ಲೆ ಇವರನ್ನು ಈ ಆದೇಶ ಹೊರಡಿಸಿದ ದಿನಾಂಕದಿಂದ ಮುಂದಿನ 06 ತಿಂಗಳ ಅವಧಿಗೆ ಆಡಳಿತಾಧಿಕಾರಿಯಾಗಿ ನೇಮಿಸಿ ಆದೇಶಿಸಿದೆ.

ಆಡಳಿತಾಧಿಕಾರಿಯು ಕೂಡಲೇ ಸಂಘದ ಪ್ರಭಾರವನ್ನು ವಹಿಸಿಕೊಂಡು, ಸಂಘದ ಆಡಳಿತ ಮಂಡಳಿಗೆ ಚುನಾವಣೆ ನಡೆಸಿ, ಚುನಾಯಿತ ನೂತನ ಆಡಳಿತ ಮಂಡಳಿಗೆ ಅಧಿಕಾರ ಹಸ್ತಾಂತರಿಸಿ, ಸರ್ಕಾರಕ್ಕೆ ವರದಿ ಸಲ್ಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ರಂಗನಾಥ.ಜಿ)
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಹಕಾರ ಇಲಾಖೆ.

ಮುದ್ರಕರು ಹಾಗೂ ಪ್ರಕಾಶಕರು:- ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

THAMMAIAH